# ಮಂಗಳವಾರ ಹೊಸ ಸಭಾಪತಿ ಆಯ್ಕೆ

**ಸಂ.ಕ.ಸಮಾಚಾರ ಬೆಂಗಳೂರು** 6/2/21

ವಿಧಾನ ಪರಿಷತ್ ನೂತನ ಸಭಾಪತಿ ಆಯ್ಕೆಯ ಚುನಾವಣೆಗೆ ರಾಜ್ಯಪಾಲರು ಅಧಿಸೂಚನೆ ಹೊರಡಿಸಿದ್ದು, ಫೆಬ್ರವರಿ 9ರಂದು ಮಂಗಳವಾರ ಚುನಾವಣೆ ನಡೆಯಲಿದೆ.

ಶುಕ್ರವಾರ ಬೆಳಗ್ಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಸಚಿವ ಸಂಪುಟ ತುರ್ತು ಸಭೆಯಲ್ಲಿ ಸಭಾಪತಿ ಸ್ಥಾನಕ್ಕೆ ಕೆ.ಪ್ರತಾಪ್‌ಚಂದ್ರ ಶೆಟ್ಟಿ ಸಲ್ಲಿಸಿರುವ ರಾಜಿನಾಮೆ ಅಂಗೀಕರಿಸುವ ಠರಾವು ಸ್ವೀಕರಿಸಿ, ರಾಜ್ಯಪಾಲರಿಗೆ ರವಾನಿಸಲಾಗಿತ್ತು. ಸರ್ಕಾರದ ಶಿಫಾರಸು ಅಂಗೀಕರಿಸಿ, ಹೊಸ ಸಭಾಪತಿ ಆಯ್ಕೆಗೆ ಫೆ.8ರಂದು ಸೋಮವಾರ ನಾಮಪತ್ರ ಸಲ್ಲಿಕೆಗೆ ಹಾಗೂ ಫೆ.9ರಂದು ಚುನಾವಣೆ ನಡೆಸಲು ರಾಜ್ಯಪಾಲರು ಸಂಜೆ ಅಧಿಸೂಚನೆ ಹೊರಡಿಸಿದ್ದಾರೆ.

ಈ ಮಧ್ಯೆ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಹೊಸ ಸಭಾಪತಿ ಆಯ್ಕೆ ಕುರಿತಂತೆ ಅನೌಪಚಾರಿಕ ಚರ್ಚೆ ನಡೆದಿದ್ದು, ಜೆಡಿಎಸ್‌ನ ಹಿರಿಯ ಸದಸ್ಯ ಬಸವರಾಜ ಹೊರಟ್ಟಿ ಅವರನ್ನು ಸಭಾಪತಿ ಸ್ಥಾನದ ಅಭ್ಯರ್ಥಿಯನ್ನಾಗಿ ಬೆಂಬಲಿಸಲು ತೀರ್ಮಾನಿಸಲಾಗಿದೆ. ಈಗಾಗಲೇ ಜೆಡಿಎಸ್ ಬೆಂಬಲದಿಂದ ಬಿಜೆಪಿಯ ಎಂ.ಕೆ.ಪ್ರಾಣೇಶ್ ಉಪ ಸಭಾಪತಿಯಾಗಿ ಆಯ್ಕೆಯಾಗಿದ್ದು, ಸಭಾಪತಿ ಸ್ಥಾನ ಜೆಡಿಎಸ್‌ಗೆ ಬಿಟ್ಟುಕೊಡುವ ನಿರ್ಧಾರಕ್ಕೆ ಬರಲಾಗಿದೆ.

ಇದೇ ವೇಳೆ ಮಂಗಳವಾರ ಹೊಸ ಸಭಾಪತಿ ಆಯ್ಕೆಯ ಬಳಿಕ ಬುಧವಾರ ಪರಿಷತ್‌ನಲ್ಲಿ ಗೋಹತ್ಯೆ ವಿಧೇಯಕ ಮಂಡನೆ ಮಾಡುವುದು ಹಾಗೂ ಅದು ಸ್ವೀಕಾರ ಆಗುವಂತೆ ನೋಡಿಕೊಳ್ಳುವ ಕುರಿತಂತೆಯೂ ಸಭೆಯಲ್ಲಿ ಚರ್ಚಿಸಲಾಗಿದೆ. ಗೋಹತ್ಯೆ ವಿಧೇಯಕ್ಕ ಮಂಡನೆಗೆ ಜೆಡಿಎಸ್ ತಾತ್ವಿಕ ಒಪ್ಪಿಗೆ ನೀಡಿರುವ ಹಿನ್ನೆಲೆಯಲ್ಲಿ ಬುಧವಾರ ಈ ವಿಧೇಯಕ ಮಂಡನೆ ಆಗುವುದು ಬಹುತೇಕ ಖಚಿತವಾಗಿದೆ.